# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 40 |
| ಮಾನ್ಯ ಸದಸ್ಯರ ಹೆಸರು | ಶ್ರೀ. ಎಂ.ಎಲ್ ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 12.09.2022 |
| ಉತ್ತರಿಸುವ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಶೃಂಗೇರಿ ತಾಲ್ಲೂಕಿನ ಜನ 100 ಬೆಡ್ ಆಸ್ಪತ್ರೆಯನ್ನು ಮಂಜೂರು ಮಾಡುವಂತೆ ಪ್ರತಿಭಟನೆ ಮಾಡಿದ್ದರೂ ಸಹ ಸರ್ಕಾರ ವಿಳಂಬ ಮಾಡುತ್ತಿರುವುದಕ್ಕೆ ಕಾರಣಗಳೇನು: (ಸಂಪೂರ್ಣ ಮಾಹಿತಿ ನೀಡುವುದು) | 2022-23 ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 112 ರಲ್ಲಿ ತಾಲ್ಲೂಕು ಮಟ್ಟದಲ್ಲಿ ಸುಸಜ್ಜಿತ ವೈದ್ಯಕೀಯ ಸೇವೆಗಳನ್ನು ಒದಗಿಸಲು ರಾಜ್ಯದ 07 ತಾಲ್ಲೂಕು ಆಸ್ಪತ್ರೆಗಳನ್ನು 100 ಹಾಸಿಗೆಗಳ ಆಸ್ಪತ್ರೆಗಳನ್ನಾಗಿ ಮೇಲ್ದರ್ಜೆಗೇರಿಸಲು ಘೋಷಿಸಲಾಗಿರುತ್ತದೆ.ಇದರಲ್ಲಿ ಶೃಂಗೇರಿ ತಾಲ್ಲೂಕಿನಲ್ಲಿ 100 ಹಾಸಿಗೆಗಳ ನಿರ್ಮಾಣ ಕಾಮಗಾರಿಯು ಸೇರ್ಪಡೆಗೊಂಡಿದೆ. 07 ತಾಲ್ಲೂಕುಗಳ ಆಸ್ಪತ್ರೆಗಳನ್ನು 100 ಹಾಸಿಗೆಗಳ ಆಸ್ಪತ್ರೆಗಳನ್ನಾಗಿ ಮೇಲ್ದರ್ಜೆಗೇರಿಸುವ ಬಗ್ಗೆ ಆಯುಕ್ತರು,ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಇವರಿಂದ ಸ್ವೀಕೃತವಾಗಿರುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ. |
| ಆ | ಶೃಂಗೇರಿ ತಾಲ್ಲೂಕಿನಲ್ಲಿ 100 ಬೆಡ್ ಆಸ್ಪತ್ರೆಯನ್ನು ಮಾಡುವ ಪ್ರಸ್ತಾವನೆಯು ಯಾವ ಹಂತದಲ್ಲಿದೆ: (ಸಂಪೂರ್ಣ ಮಾಹಿತಿ ನೀಡುವುದು) | |
| ಇ | ಸ್ಥಳ ಗುರುತಿಸುವ ಸಂಬಂಧ 100 ಬೆಡ್ ಆಸ್ಪತ್ರೆಯ ಪ್ರಸ್ತಾವನೆಯು ವಿಳಂಬವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಆಸ್ಪತ್ರೆಯನ್ನು ನಿರ್ಮಾಣ ಮಾಡುವ ಸಲುವಾಗಿ ಗುರುತಿಸಲಾಗಿದ್ದ ಸ್ಥಳವು ಅರಣ್ಯ ಇಲಾಖೆಯ ವಶದಲ್ಲಿದ್ದು, ಅರಣ್ಯ ಇಲಾಖೆಯಿಂದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗೆ ಹಸ್ತಾಂತರವಾಗ ಬೇಕಾಗಿದೆ. |
| ಈ | ಬಂದಿದ್ದಲ್ಲಿ, ವಿಳಂಬ ಪರಿಹರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು? (ಸಂಪೂರ್ಣ ಮಾಹಿತಿ ನೀಡುವುದು). | |

ಆಕುಕ 135 ಎಸ್ಎಂಎಂ 2022

(ಡಾ|| ಕೆ. ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು